**2016ರ ಕರ್ನಾಟಕ ಅಧಿನಿಯಮ ಸಂಖ್ಯೆ: 28**
**ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ (ತಿದ್ದುಪಡಿ) ಅಧಿನಿಯಮ, 2016**
**ಪ್ರಕರಣಗಳ ಪಟ್ಟಿ**

**ಪ್ರಕರಣಗಳು:**

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ
2. 3ನೇ ಪ್ರಕರಣದ ತಿದ್ದುಪಡಿ

**ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ**

**2016ರ ಅಧಿನಿಯಮ ಸಂಖ್ಯೆ 28.–** ಕರ್ನಾಟಕ ರಾಜ್ಯದ ಹೊರಗೆ ವಿಶ್ವವಿದ್ಯಾಲಯವು ಕೇಂದ್ರಗಳನ್ನು ತೆರೆಯುವುದು, ವಿಶ್ವವಿದ್ಯಾಲಯಗಳ ಅಧಿಕಾರವ್ಯಾಪ್ತಿಯ ಕುರಿತು ವಿಶ್ವವಿದ್ಯಾಲಯ ಅನುದಾನಗಳ ಆಯೋಗವು (ಯುಜಿಸಿ) ಹೊರಡಿಸಿರುವ ಸೂಚನೆಗಳಿಗೆ ಮತ್ತು ಸಂವಿಧಾನದ 245ನೇ ಅನುಚ್ಛೇದದ ಉಪಬಂಧಗಳಿಗೆ ವಿರುದ್ಧವಾಗಿರುವುದರಿಂದ ಹಾಗೂ ಸರ್ವೋಚ್ಛ ನ್ಯಾಯಾಲಯದಲ್ಲಿನ ಪ್ರೊ. ಯಶಪಾಲ್ ವಿರುದ್ಧ ಛತ್ತೀಸಗಢ ರಾಜ್ಯ ಈ ಪ್ರಕರಣದಲ್ಲಿ ಇದನ್ನೇ ಪುನರುಚ್ಛರಿಸಿರುವುದರಿಂದ ಸದರಿ ಉಪಬಂಧಗಳನ್ನು ತೆಗೆದು ಹಾಕುವುದಕ್ಕೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಅಧಿನಿಯಮ, 1992ನ್ನು (1994ರ ಕರ್ನಾಟಕ ಅಧಿನಿಯಮ 46) ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

(2016ರ ವಿಧಾನಸಭೆಯ ವಿಧೇಯಕ ಸಂಖ್ಯೆ 20:, ಕಡತ ಸಂಖ್ಯೆ:ಸಂವ್ಯಶಾಇ 03 ಶಾಸನ 2012)
(ಭಾರತ ಸಂವಿಧಾನದ 7ನೇ ಅನುಸೂಚಿಯ 3ನೇ ಪಟ್ಟಿಯ 25ನೆಯ ನಮೂದನೆಯಡಿಯಲ್ಲಿ ಬರುತ್ತದೆ.)

**2016ರ ಕರ್ನಾಟಕ ಅಧಿನಿಯಮ ಸಂಖ್ಯೆ: 28**

(2016ರ ಆಗಸ್ಟ್ ತಿಂಗಳ ಹನ್ನೆರಡನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ (ತಿದ್ದುಪಡಿ) ಅಧಿನಿಯಮ, 2016**

(2016ರ ಆಗಸ್ಟ್ ತಿಂಗಳ ಒಂಭತ್ತನೇ ದಿನಾಂಕದಂದು ರಾಜ್ಯಪಾಲರಿಂದ ಒಪ್ಪಿಗೆಯನ್ನು ಪಡೆಯಲಾಗಿದೆ)

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಅಧಿನಿಯಮ, 1992ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಅಧಿನಿಯಮ, 1992ನ್ನು (1994ರ ಕರ್ನಾಟಕ ಅಧಿನಿಯಮ 46) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೇಳನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:–

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ (ತಿದ್ದುಪಡಿ) ಅಧಿನಿಯಮ, 2016 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 3ನೇ ಪ್ರಕರಣದ ತಿದ್ದುಪಡಿ.–** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಅಧಿನಿಯಮ, 1992ರ (1994ರ ಕರ್ನಾಟಕ ಅಧಿನಿಯಮ 46) 3ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ "ಮತ್ತು ಕರ್ನಾಟಕದ ಹೊರಗೆ ತಾನು ಉಚಿತವೆಂದು ಭಾವಿಸುವಂಥ ಸ್ಥಳಗಳಲ್ಲಿ ಸಹ ಕೇಂದ್ರಗಳನ್ನು ಪ್ರಾರಂಭಿಸಬಹುದು" ಎಂಬ ಪದಗಳನ್ನು ಬಿಟ್ಟುಬಿಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಕೆ.ದ್ವಾರಕನಾಥ್ ಬಾಬು**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳ ಇಲಾಖೆ.